**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ದೇವದುರ್ಗ.**

**CC No.409/2023**

**PW-3 CW-3**

| | | |
|---|---|---|
| ಸಾಕ್ಷಿದಾರನ ಹೆಸರು | : | ಭೀಮಣ್ಣ ತಂದೆ ಹನುಮಣ್ಣ |
| ವಯಸ್ಸು | : | 50 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸಸ್ಥಳ | : | ಮಸೀದಾಪುರ |
| ಪ್ರಮಾಣಿಕರಿಸಿದ ದಿನಾಂಕ | : | 28-02-2025 |

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ.**

ಈಗ 8-9 ವರ್ಷಗಳ ಹಿಂದೆ ಬೆಳಿಗ್ಗೆ 11-00 ರಿಂದ 12-00 ರ ಸುಮಾರಿಗೆ ಪೊಲೀಸರು ಕುರಿ ಕಳ್ಳತನವಾಗಿರುವ ಸ್ಥಳದಲ್ಲಿ ಅಂಗನವಾಡಿಯ ಹತ್ತಿರ ಪಂಚನಾಮೆ ಮಾಡಿ ನನ್ನ ಸಹಿ ಪಡೆದಿರುತ್ತಾರೆ. ಸಾಕ್ಷಿಯು ಪಂಚನಾಮೆಯ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದೆ, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ವಿ.ಡಿ.ಸಿ ವಕೀಲರಿಂದ.**

ನನಗೆ ಕನ್ನಡ ಓದಲು ಬರೆಯಲು ಬರುವುದಿಲ್ಲ ಕೇವಲ ಸಹಿ ಮಾತ್ರ ಮಾಡುತ್ತೇನೆ. ಬರೆದ ಪಂಚನಾಮೆಯ ಮೇಲೆ ನಾನು ಸಹಿ ಮಾಡಿರುತ್ತೇನೆ. ಪಂಚನಾಮೆಯಲ್ಲಿ ಬರೆದ ಸಂಗತಿಗಳನ್ನು ಪೊಲೀಸರು ನನಗೆ ಓದಿ ಹೇಳಿರುವುದಿಲ್ಲ. ಪಂಚನಾಮೆಯ ಕಾಲಕ್ಕೆ ಬೂದೆಪ್ಪ ಹಾಜರಿದ್ದರು ಆತನನ್ನು ಹೊರತುಪಡಿಸಿ ಬೇರೆ ಯಾರು ಇರಲಿಲ್ಲ. ಚಾಸಾ-1 ನನಗೆ ಸಂಬಂಧಿಕನಾಗಬೇಕು. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡದೇ ಇದ್ದರೂ ಚಾಸಾ-1 ರವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೇ.ಸರಿ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ದೇವದುರ್ಗ.